333 (330) ಶ್ರೀ ಧ್ರುವನಾರಾಯಣ್ ಆರ್ (ಸಂತೇಮರಳ್ಳಿ) ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ನಕ್ಸಲ್‌ರ ಹಾವಳಿ ಇರುವ ಜಿಲ್ಲೆಗಳಾವುವು,

ಆ) ನಕ್ಷಲರ ಹಾವಳಿಯನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು,

ಇ) ನಕ್ಸಲರ ಹಾವಳಿ ಇರುವ ಜಿಲ್ಲೆಗಳಲ್ಲಿ ಇದಕ್ಕಾಗಿ ನಿಗಧಿಪಡಿಸಿರುವ ಅನುದಾನವೆಷ್ಟು, ಈ ಅನುದಾನವನ್ನು ಯಾವ ಕಾರ್ಯಕ್ರಮಕ್ಕಾಗಿ ನಿಗಧಿಪಡಿಸಿದೆ,

ಈ) ನಕ್ಸಲ್ ಸಂಘಟನೆಯಲ್ಲಿ ವಿದ್ಯಾವಂತ ನಿರುದ್ಯೋಗಿಗಳು ತೊಡಗಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಉ) ಹಾಗಿದ್ದಲ್ಲಿ, ಇನ್ನು ಮುಂದೆ ವಿದ್ಯಾವಂತ ನಿರುದ್ಯೋಗಿಗಳು ಈ ಸಂಘಟನೆಗೆ ಸೇರದಂತೆ ಮಾಡಲು ರಾಜ್ಯದಲ್ಲಿ ಅದರಲ್ಲೂ ಮುಖ್ಯವಾಗಿ ಹಿಂದುಳಿದ ಜಿಲ್ಲೆಗಳಲ್ಲಿ ನಿರುದ್ಯೋಗಿ ಯುವಕ/ಯುವತಿಯರಿಗೆ ಉದ್ಯೋಗದ ಅವಕಾಶ ಕಲ್ಪಿಸಲು ಸರ್ಕಾರ ಮುಂದೆ ಬರುವುದೆ?

ಶ್ರೀ ಎಂ ಪಿ ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):

ಅ) ರಾಜ್ಯದಲ್ಲಿ ತುಮಕೂರು, ಕೋಲಾರ, ಚಿಕ್ಕಮಗಳೂರು, ಉಡುಪಿ ದಕ್ಷಿಣ ಕನ್ನಡ, ಬಳ್ಳಾರಿ, ಬೀದರ್, ಚಿತ್ರದುರ್ಗ, ಶಿವಮೊಗ್ಗ, ಗುಲ್ಬರ್ಗಾ, ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳು ನಕ್ಸಲ್ ಪೀಡಿತ ಜಿಲ್ಲೆಗಳಾಗಿವೆ

ಆ) ರಾಜ್ಯದಲ್ಲಿ ನಕ್ಸಲ್ ಹಾವಳಿಯನ್ನು ತಡೆಗಟ್ಟಲು ಸರ್ಕಾರವು ಎ ಎನ್ ಎಫ್ ದಳವನ್ನು ರಚಿಸಿರುತ್ತದೆ ಪ್ರಸ್ತುತ ಪ್ರಮುಖ ನಕ್ಸಲ್ ಪೀಡಿತ ಜಿಲ್ಲೆಗಳಲ್ಲಿ ಪೊಲೀಸ್ ಅಧೀಕ್ಷಕರ ಅಧೀನದಲ್ಲಿ ಎ ಎಸ್ ಎಫ್ ತುಕಡಿಗಳನ್ನು ರಚಿಸಿ ಕಾರ್ಯಾಚರಣೆಗೆ ಕೊಡಲಾಗಿದೆ

ಇ) ನಕ್ಸಲ್ ಭಾದಿತ ಜಿಲ್ಲೆಗಳಿಗೆ 2005–06ನೇ ಸಾಲಿನಲ್ಲಿ ಹಾಗೂ 2006–07ನೇ ಸಾಲಿನಲ್ಲಿ ನಿಗಧಿಪಡಿಸಲಾದ ಅನುದಾನದ ವಿವರವನ್ನು ಈ ಕೆಳಕಂಡಂತಿದೆ

(ರೂ ಕೋಟಿಗಳಲ್ಲಿ)

ಕ್ರ.ಸಂ	ವರ್ಷ	ನಿಗದಿಪಡಿಸಲಾದ ಅನುದಾನ
1	2005–06	8 00
2	2006–07	15 20

ಈ ಅನುದಾನವನ್ನು ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ತೆಗೆದುಕೊಳ್ಳುವ ಸಲುವಾಗಿ ನಿಗದಿ ಪಡಿಸಿದೆ.

ಈ) ಹೌದು

ಉ) ವಿದ್ಯಾವಂತ ನಿರುದ್ಯೋಗಿಗಳು ಈ ಸಂಘಟನೆಗೆ ಸೇರದಂತೆ ಮಾಡಲು ಕರ್ನಾಟಕ ರಾಜ್ಯ ಪೊಲೀಸ್ ಹೌಸಿಂಗ್ ಕಾರ್ಪೊರೇಷನ್ ವತಿಯಿಂದ ಮಲೆನಾಡು ಪ್ರದೇಶದ ಬುಡಕಟ್ಟು ಯುವಕರಿಗೆ ವೃತ್ತಿಪರ ತರಬೇತಿಯನ್ನು ಆಗುಂಬೆಯಲ್ಲಿ ಕೊಡಲಾಗುತ್ತಿದೆ 2004 ರಿಂದ '2007 (ಜನವರಿ) ರವರೆಗೆ 240 ನಿರುದ್ಯೋಗಿ ಯುವಕರಿಗೆ ವೃತ್ತಿಪರ ತರಬೇತಿ ಕೊಡಲಾಗಿದೆ

ಈ ಸಂಬಂಧ ವಿವರಗಳುಳ್ಳ ಟಿಪ್ಪಣಿಯನ್ನು ಲಗತ್ತಿಸಿದೆ

364 (648) ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಮೆಟ್ರೋ ರೈಲು ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವುದು ನಿಜವಲ್ಲವೇ,

ಆ) ಹಾಗಿದ್ದಲ್ಲಿ, ಈ ಯೋಜನೆಯ ಕಾಮಗಾರಿಯನ್ನು ಯಾವಾಗ ಆರಂಭಿಸಲಾಗುವುದು,

ಇ) ಈ ಯೋಜನೆಯಿಂದ ನಿರ್ವಸಿತರಾಗುವವರಿಗೆ ಯಾವ ಆಧಾರದ ಮೇಲೆ ಪರಿಹಾರ ಧನ ನಿರ್ಧರಿಸಲಾಗುವುದು ಹಾಗೂ ಇದಕ್ಕಾಗಿ ನಿಗದಿಪಡಿಸಲಾಗಿರುವ ಅನುದಾನ ಎಷ್ಟು,

ಈ) ಈ ಯೋಜನೆ ಅನುಷ್ಠಾನಕ್ಕಾಗಿ ಇಲ್ಲಿಯವರೆಗೆ ಎಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ಹಾಗೂ ವಿತರಿಸಲಾಗಿರುವ ಪರಿಹಾರದ ಮೊತ್ತ ಎಷ್ಟು,

ಉ) ಈ ಯೋಜನೆಯ ಭೂಸ್ವಾಧೀನದ ಬಗ್ಗೆ ನ್ಯಾಯಾಲಯದಲ್ಲಿ ಪ್ರಕರಣಗಳು ದಾಖಲಾಗಿವೆಯೇ,